ಕರ್ನಾಟಕ ಸರ್ಕಾರ.

ಸಂಖ್ಯೆ: ಕಂಇ 06 ಮುನೋಮು 2013

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: 18-07-2014.

## ಸುತ್ತೋಲೆ

ವಿಷಯ:- ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸ್ಥಿರ ಸ್ವತ್ತುಗಳನ್ನು ನೋಂದಣಿ ಮಾಡುವಾಗ ಅನುಸರಿಸುವ ಕ್ರಮ.

ಉಲ್ಲೇಖ:-1) ಸರ್ಕಾರದ ಸುತ್ತೋಲೆ ಸಂಖ್ಯೆ:ಕಂಇ 344 ಮುನೋಮು 2008, ದಿನಾಂಕ:06-04-2009.
2) ಸರ್ಕಾರದ ತಿದ್ದೋಲೆ ಸಂಖ್ಯೆ: ಕಂಇ 6 ಮುನೋಮು 2013, ದಿನಾಂಕ: 23-04-2014.

********

ಪ್ರಸ್ತಾವಿತ ವಿಷಯಕ್ಕೆ ಸಂಬಂಧಿಸಿದಂತೆ, ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸ್ಥಿರ ಸ್ವತ್ತುಗಳನ್ನು ನೋಂದಣಿ ಮಾಡುವ ಸಮಯದಲ್ಲಿ ಕ್ರಮ ಬದ್ಧವಾದ ಸ್ವತ್ತುಗಳಿಗೆ ನಮೂನೆ-9 ಮತ್ತು 11-ಎ ಹಾಗೂ ಕ್ರಮ ಬದ್ಧವಲ್ಲದ ಸ್ವತ್ತುಗಳಿಗೆ 11-ಬಿ ಮಾತ್ರ ಪಡೆದು ನೋಂದಾಯಿಸಲು ನಿರ್ದೇಶನ ನೀಡಲಾಗಿತ್ತು.

ಕಾವೇರಿ ತಂತ್ರಾಂಶ ಮತ್ತು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸ್ವತ್ತುಗಳಿಗಾಗಿ ಇರುವ "ಇ-ಸ್ವತ್ತು" ತಂತ್ರಾಂಶವನ್ನು ಸಂಯೋಜನೆಗೊಳಿಸಿರುವುದರಿಂದ ದಿನಾಂಕ: 18-07-2014 ರಿಂದ ಕೃಷಿ ಜಮೀನಿನ ನೋಂದಣಿಗೆ "ಭೂಮಿ" ತಂತ್ರಾಂಶದಿಂದ ಮಾಹಿತಿ ಪಡೆದು ನೋಂದಣಿ ಮಾಡುವ ವಿಧಾನದಲ್ಲೇ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸ್ವತ್ತುಗಳಿಗೆ ಇರುವ "ಇ-ಸ್ವತ್ತು" ತಂತ್ರಾಂಶದಿಂದ ಮಾಹಿತಿ ಪಡೆದು ನೋಂದಣಿ ಮಾಡಲು ಆದೇಶಿಸಿದೆ.

ಒಂದು ವೇಳೆ "ಇ-ಸ್ವತ್ತು" ತಂತ್ರಾಂಶದಲ್ಲಿ ಮಾಹಿತಿ ಲಭ್ಯವಿಲ್ಲದಿದ್ದಲ್ಲಿ ಕಾವೇರಿ ತಂತ್ರಾಂಶದಿಂದ ಉತ್ಪತ್ತಿಯಾಗುವ ಹಿಂಬರಹವನ್ನು ದಸ್ತಾವೇಜನ್ನು ಹಾಜರು ಪಡಿಸುವ ಪಕ್ಷಕಾರರಿಗೆ ನೀಡಲು ಸೂಚಿಸಿದೆ.

ಇದನ್ನು ಹೊರತುಪಡಿಸಿ ಬೇರೆ ಯಾವುದೇ ವಿಧಾನದಲ್ಲಿ ನೋಂದಣಿ ಮಾಡಿದಲ್ಲಿ ಅಂತಹ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಜರುಗಿಸಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಟಿ.ನಾರಾಯಣಪ್ಪ)
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ)
ಕಂದಾಯ ಇಲಾಖೆ
(ನೋಂದಣಿ ಮತ್ತು ಮುದ್ರಾಂಕ)

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು-ಮುಂದಿನ ವಿಶೇಷ ಸಂಚಿಕೆಯಲ್ಲಿ

ಕರ್ನಾಟಕ ಸರ್ಕಾರ

ಸಂಖ್ಯೆ:ಕಂಇ 6 ಮುನೋಮು 2013

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:24.01.2013.

## ತಿದ್ದುಪಡಿ

ಕಂದಾಯ ಇಲಾಖೆಯ ಸುತ್ತೋಲೆ ಸಂಖ್ಯೆ: ಕಂಇ 344 ಮುನೋಮು 2008 ದಿನಾಂಕ:06.04.2009ರ ಅನುಬಂಧ I ಮತ್ತು V ರಲ್ಲಿ 'ನಮೂನೆ 1 ಮತ್ತು 12' ಎಂದು ನಮೂದಿಸಲಾಗಿರುವ ಸ್ಥಳದಲ್ಲಿ 'ನಮೂನೆ 9 ಮತ್ತು 11' ಎಂದು ತಿದ್ದಿ ಓದಿಕೊಳ್ಳತಕ್ಕದ್ದು.

ಸ್ಪಷ್ಟೀಕರಣ:

1. 'ನಮೂನೆ 9 ಮತ್ತು 11' ಎಂದು ನಮೂದಾಗಿರುವುದರಿಂದ ನೋಂದಣಿಗಾಗಿ ಎರಡೂ ದಾಖಲೆಗಳ ಅವಶ್ಯವಿರುತ್ತದೆ.
2. 'ನಮೂನೆ 9 ಮತ್ತು 11' ಕರ್ನಾಟಕ ಸರ್ಕಾರವು ಕಾಲಕಾಲಕ್ಕೆ ರಚಿಸಿರುವ ಕರ್ನಾಟಕ ಪಂಚಾಯತ್ ರಾಜ್ (ಆಯವ್ಯಯ ಮತ್ತು ಲೆಕ್ಕಪತ್ರ) ನಿಯಮಗಳಲ್ಲಿ ನಿಗದಿ ಪಡಿಸಿರುವ ರೀತಿ ಮತ್ತು ಸ್ವರೂಪದಲ್ಲಿರಬೇಕು.
3. ನೋಂದಣಿಗೆ ಒಳಪಡುವ ದಸ್ತಾವೇಜಿನ ಆಸ್ತಿಗಳ ವಿವರ ಹಾಗೂ 'ನಮೂನೆ 9 ಮತ್ತು 11'ರಲ್ಲಿ ನಮೂದಿಸಿರುವ ವಿವರಕ್ಕೆ ಹೊಂದಾಣಿಕೆ ಇರಬೇಕು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ಕೆ.ರಾಮಚಂದ್ರ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕಂದಾಯ ಇಲಾಖೆ.
(ನೋಂದಣಿ ಮತ್ತು ಮುದ್ರಾಂಕ)

ಇವರಿಗೆ:
ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು, ಮುಂದಿನ ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಲು ಹಾಗೂ 1000 ಪ್ರತಿಗಳನ್ನು ಕಂದಾಯ ಇಲಾಖೆಗೆ ಒದಗಿಸಲು ಕೋರಿದೆ.

ಪ್ರತಿ:
1) ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2) ಸರ್ಕಾರದ ಹೆಚ್ಚುವರಿ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂ.
3) ಅಭಿವೃದ್ಧಿ ಆಯುಕ್ತರು ಮತ್ತು ಅಪರ ಮುಖ್ಯ ಕಾರ್ಯದರ್ಶಿಗಳು, ಬೆಂಗಳೂರು.
4) ಸರ್ಕಾರದ ಕಾರ್ಯದರ್ಶಿಗಳು, ವಸತಿ ಇಲಾಖೆ, ವಿಕಾಸಸೌಧ, ಬೆಂಗಳೂರು.
5) ಸರ್ಕಾರದ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ವಿಕಾಸಸೌಧ, ಬೆಂಗಳೂರು.
6) ನಿರ್ದೇಶಕರು, ನಗರ ಯೋಜನಾ ಪ್ರಾಧಿಕಾರ, ಬೆಂಗಳೂರು.
7) ನೋಂದಣಿ ಮಹಾಪರಿವೀಕ್ಷಕರು ಹಾಗೂ ಮುದ್ರಾಂಕಗಳ ಆಯುಕ್ತರು, ಬೆಂಗಳೂರು.

(19)



8) ಮಾನ್ಯ ಉಪ ಮುಖ್ಯಮಂತ್ರಿ ಹಾಗೂ ಕಂದಾಯ ಸಚಿವರ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ.
9) ರಾಜ್ಯದ ಎಲ್ಲಾ ಪ್ರಾದೇಶಿಕ ಆಯುಕ್ತರು.
10) ನಿರ್ದೇಶಕರು, ಭೂ ಮಾಪನ ಹಾಗೂ ಭೂ ದಾಖಲೆಗಳ ಇಲಾಖೆ, ಬೆಂಗಳೂರು.
11) ಎಲ್ಲಾ ಜಿಲ್ಲಾಧಿಕಾರಿಗಳು.
12) ಎಲ್ಲಾ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್.
13) ಎಲ್ಲಾ ಜಿಲ್ಲಾ ನೋಂದಣಾಧಿಕಾರಿಗಳ ಕಛೇರಿಗಳಿಗೆ – ನೋಂದಣಿ ಮಹಾಪರಿವೀಕ್ಷಕರು ಹಾಗೂ ಮುದ್ರಾಂಕಗಳ ಆಯುಕ್ತರವರ ಮುಖಾಂತರ.
14) ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
15) ಆಯುಕ್ತರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು.
16) ಎಲ್ಲಾ ಮಹಾನಗರ ಪಾಲಿಕೆಗಳ ಆಯುಕ್ತರು.
17) ಎಲ್ಲಾ ನಗರ ಪಾಲಿಕೆ ಆಯುಕ್ತರು.
18) ಎಲ್ಲಾ ನಗರ ಸಭೆ ಆಯುಕ್ತರು.
19) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು.
20) ಸರ್ಕಾರದ ಕಾರ್ಯದರ್ಶಿಗಳು(ವಿಪತ್ತು ನಿರ್ವಹಣೆ), ಕಂದಾಯ ಇಲಾಖೆ ಇವರ ಪತ್ರಾಂಕಿತ ಆಪ್ತ ಸಹಾಯಕರು.
21) ಸರ್ಕಾರದ ಉಪ ಕಾರ್ಯದರ್ಶಿ, ಕಂದಾಯ ಇಲಾಖೆ ಇವರ ಆಪ್ತ ಸಹಾಯಕರು.
22) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.